ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS 13

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 19/6/20

## ವಿಧಾನ ಪರಿಷತ್‌ಗೆ 29 ರಂದು ದ್ವೈವಾರ್ಷಿಕ ಚುನಾವಣೆ

# 7 ಅಭ್ಯರ್ಥಿಗಳಿಂದ ನಾಮಪತ್ರ

19-6-2020

ಪ್ರಜಾವಾಣಿ ವಾರ್ತೆ

ಬೆಂಗಳೂರು: ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ದ್ವೈವಾರ್ಷಿಕ ಚುನಾವಣೆಯಲ್ಲಿ ಟಿಕೆಟ್ ಪಡೆದಿರುವ ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳ ಎಲ್ಲಾ ಏಳು ಮಂದಿ ಅಭ್ಯರ್ಥಿಗಳು ಗುರುವಾರ ಇಲ್ಲಿ ತಮ್ಮ ನಾಮಪತ್ರ ಸಲ್ಲಿಸಿದರು.

ಮೊದಲಿಗೆ ಜೆಡಿಎಸ್ ಅಭ್ಯರ್ಥಿ ಗೋವಿಂದರಾಜ್ ಅವರು ವಿಧಾನಸಭೆ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರೆ, ಬಳಿಕ ಕಾಂಗ್ರೆಸ್ ಅಭ್ಯರ್ಥಿಗಳಾದ ಬಿ.ಕೆ. ಹರಿಪ್ರಸಾದ್, ನಜೀರ್ ಅಹಮದ್, ಬಿಜೆಪಿ ಅಭ್ಯರ್ಥಿಗಳಾದ ಎಂ.ಟಿ. ಬಿ.ನಾಗರಾಜ್, ಆರ್.ಶಂಕರ್, ಸುನಿಲ್ ವಲ್ಯಾಪುರೆ ಹಾಗೂ ಪ್ರತಾಪಸಿಂಹ ನಾಯಕ್ ನಾಮಪತ್ರ ಸಲ್ಲಿಸಿದರು.

'ಮೇಲ್ಮನೆ ಅಂದರೆ ಅಲ್ಲಿ ಅನುಭವಿಗಳೇ ಬೇಕು. ಹೀಗಾಗಿ ಇಬ್ಬರು ಅನುಭವಿಗಳನ್ನೇ ಕಳುಹಿಸಲಾಗುತ್ತಿದೆ. ವಿಧಾನಸಭೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪಕ್ಷದ ಸಕ್ರಿಯ ಕಾರ್ಯಕರ್ತರಿಗೆ ಅವಕಾಶ ಕೊಡಲಾಗುತ್ತದೆ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದರು.

'ಕೋಲಾರ, ಚಿಕ್ಕಬಳ್ಳಾಪುರ ಭಾಗದಲ್ಲಿ ಜೆಡಿಎಸ್ ಪಕ್ಷವನ್ನು ಬಲಪಡಿಸುವ ಉದ್ದೇಶದೊಂದಿಗೆ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಗೋವಿಂದರಾಜು ಅವರಿಗೆ ಟಿಕೆಟ್ ನೀಡಲಾಗಿದೆ' ಎಂದು ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯಿಸಿದರು.

'ಪಕ್ಷದ ಸಾಮಾನ್ಯ ಕಾರ್ಯಕರ್ತರಾಗಿದ್ದ ಪ್ರತಾಪಸಿಂಹ ನಾಯಕ್, ಮಾಜಿ ಶಾಸಕ ಸುನಿಲ್ ವಲ್ಯಾಪುರೆ ಹಾಗೂ ಬಿಜೆಪಿ ಸರ್ಕಾರ ರಚನೆಗೆ ಕಾರಣಕರ್ತರಾದ ಶಂಕರ್ ಮತ್ತು ನಾಗರಾಜ್ ಅವರಿಗೆ ಟಿಕೆಟ್ ನೀಡಲಾಗಿದೆ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ತಿಳಿಸಿದರು.

## ಸಂಘಟನಾ ಚತುರನಿಗೆ ಒಲಿದ ಟಿಕೆಟ್


ಕೆ.ಪ್ರತಾಪಸಿಂಹ ನಾಯಕ್

ಉಜಿರೆ: ದಶಕಗಳ ಕಾಲದಿಂದ ಪಕ್ಷ ಸಂಘಟನೆಯಲ್ಲಿ ಸಕ್ರಿಯರಾಗಿದ್ದ ಕೆ. ಪ್ರತಾಪಸಿಂಹ ನಾಯಕ್ ಅವರಿಗೆ ಮೇಲ್ಮನೆ ಸದಸ್ಯತ್ವದ ಉಡುಗೊರೆಯನ್ನು ಬಿಜೆಪಿ ನೀಡಿದೆ.

60 ವರ್ಷದ ಪ್ರತಾಪಸಿಂಹ ನಾಯಕ್ ಅವರು ಬೆಳ್ತಂಗಡಿ ತಾಲ್ಲೂಕಿನಲ್ಲಿ ವಕೀಲರಾಗಿ ಚಿರಪರಿಚಿತರು. ಪಕ್ಷದ ವಿವಿಧ ಘಟಕಗಳಲ್ಲಿ ಕಾರ್ಯನಿರ್ವಹಿಸಿದ್ದ ಇವರು, ಬಿಜೆಪಿ ದಕ್ಷಿಣ ಕನ್ನಡ ಜಿಲ್ಲಾ ಘಟಕದ ಅಧ್ಯಕ್ಷರಾಗಿಯೂ ಕೆಲಸ ಮಾಡಿದ್ದಾರೆ. ಪಕ್ಷದ ವಿವಿಧ ವಿಭಾಗಗಳ ಪ್ರಭಾರಿಯಾಗಿ, ಚುನಾವಣಾ ಉಸ್ತುವಾರಿಯಾಗಿಯೂ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ. ಉಜಿರೆಯ ಎಸ್‌ಡಿಎಂ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಣ ಪಡೆದ ನಾಯಕ್, ವಿದ್ಯಾರ್ಥಿ ಜೀವನದಿಂದಲೇ ರಾಜಕೀಯ ಪ್ರವೇಶಿಸಿದ್ದರು. ಇವರು ಉತ್ತಮ ವಾಗ್ಮಿ ಹಾಗೂ ಸಂಘಟನಾ ಚತುರರಾಗಿಯೂ ಪಕ್ಷದೊಳಗೆ ಹೆಸರು ಪಡೆದವರು.

## ಜಿಲ್ಲೆಯ ಉದ್ಯಮಿಗೆ ಅವಕಾಶ


ಗೋವಿಂದರಾಜು

ಕೋಲಾರ: ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ 61 ವರ್ಷದ ಗೋವಿಂದರಾಜು ಅವರು ಅವಿಭಜಿತ ಕೋಲಾರ ಜಿಲ್ಲೆಯಲ್ಲಿ ಉದ್ಯಮಿಯಾಗಿ ಗುರುತಿಸಿಕೊಂಡಿದ್ದಾರೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ (ಕೆಎಸ್‌ಆರ್‌ಟಿಸಿ) ತನಿಖಾಧಿಕಾರಿಯಾಗಿದ್ದ ಅವರು, ಸ್ವಯಂ ನಿವೃತ್ತಿ ಪಡೆದು ಲೇವಾದೇವಿ ವ್ಯವಹಾರ (ಫೈನಾನ್ಸ್) ಆರಂಭಿಸಿದರು. ನಂತರ ಕುಕ್ಕುಟೋದ್ಯಮ, ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ತೊಡಗಿಸಿಕೊಂಡರು. ಜಿಲ್ಲಾ ಕೇಂದ್ರದಲ್ಲಿ ಚಿತ್ರಮಂದಿರ, ಕಲ್ಯಾಣ ಮಂಟಪ ಹೊಂದಿದ್ದು, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಪರಮಾಪ್ತರು.

ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡರ ಜತೆ ಉತ್ತಮ ಒಡನಾಟ ಹೊಂದಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಗೆ ಕೋಲಾರ ಕ್ಷೇತ್ರದಲ್ಲಿ ಸ್ಪರ್ಧಿಸಲು ಸಿದ್ಧತೆ ನಡೆಸಿದ್ದ ಇವರಿಗೆ ಮೇಲ್ಮನೆ ಪ್ರವೇಶಿಸುವ ಅವಕಾಶ ಒಲಿದು ಬಂದಿದೆ.